**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಯಶಸ್ವಿನಿ ಸಹಕಾರಿ ಆರೋಗ್ಯ ರಕ್ಷಣಾ ಯೋಜನೆ (ಯಶಸ್ವಿನಿ ಯೋಜನೆ) ಯನ್ನು 2017-18ನೇ ಸಾಲಿನಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೂಲಕ ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:** 1) 2017-18ನೇ ಸಾಲಿನ ಸನ್ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣ.
2) ಸಚಿವ ಸಂಪುಟ ಪ್ರಕರಣ ಸಂಖ್ಯೆ ಸಿ:340/2017, ದಿನಾಂಕ: 30.05.2017.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ(1)ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರಾಜ್ಯ ಸರ್ಕಾರದ ವಿವಿಧ ಆರೋಗ್ಯ ವಿಮಾ ಕಾರ್ಯಕ್ರಮಗಳಲ್ಲಿ ಹೊಂದಾಣಿಕೆ ತರಲು ಹಾಗೂ ಎಲ್ಲಾ ಕುಟುಂಬಗಳನ್ನು ಸಾರ್ವತ್ರಿಕ ಆರೋಗ್ಯ ವ್ಯಾಪ್ತೀಕರಣದಡಿಯಲ್ಲಿ (Universal Health Coverage) ತರಲು ಉದ್ದೇಶಿಸಲಾಗಿದೆ. ಪ್ರಸ್ತುತ ಜಾರಿಯಲ್ಲಿರುವ ಯಶಸ್ವಿನಿ ಆರೋಗ್ಯ ಸುರಕ್ಷಾ ಯೋಜನೆಯು ಜಾರಿಯಲ್ಲಿರುವ ನಿಯಮಾವಗಳಿಗಳಂತೆಯೇ ಮುಂದುವರಿಯುತ್ತದೆ. ಆದರೆ, ಈ ಯೋಜನೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಡಳಿತ ನಿಯಂತ್ರಣಕ್ಕೆ ತರಲಾಗುವುದು ಎಂದು ಘೋಷಿಸಿರುತ್ತಾರೆ.

ಮೇಲೆ ಕ್ರಮಾಂಕ (2)ರಲ್ಲಿ. ಓದಲಾದ ಸಚಿವ ಸಂಪುಟ ಸಭೆಯಲ್ಲಿ ಯಶಸ್ವಿನಿ ಯೋಜನೆಯನ್ನು 2017-18ನೇ ಸಾಲಿನಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೂಲಕ ಮುಂದುವರಿಸಲು ಸರ್ಕಾರಿ ಆದೇಶ ಹೊರಡಿಸಲು ಹಾಗೂ ಟಸ್ಟ್ ಡೀಡ್ ಗೆ ತಿದ್ದುಪಡಿ ತಂದು ಸರ್ಕಾರದ ಕಾರ್ಯದರ್ಶಿ, ಸಹಕಾರ ಇಲಾಖೆಯ ಬದಲು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರನ್ನು ಅಧ್ಯಕ್ಷರನ್ನಾಗಿ ಮಾಡುವ ಪ್ರಸ್ತಾವನೆಗೆ ಅನುಮೋದನೆ ನೀಡಿದೆ. ಟ್ರಸ್ಟ್ ಡೀಡ್‌ಗೆ ಮಾಡಬೇಕಾದ ಉಳಿದ ತಿದ್ದುಪಡಿಗಳನ್ನು ಕುರಿತು ಉಪಬಂಧ 17ರ ಪ್ರಕಾರ ಯಶಸ್ವಿನಿ ಕೋ-ಆಪರೇಟಿವ್ ಫಾರ್ಮರ್ಸ್ ಹೆಲ್ತ್ ಕೇರ್ ಟ್ರಸ್ಟ್‌ಗೆ ಮಾತ್ರ ಅಧಿಕಾರವಿರುವ ಹಿನ್ನೆಲೆಯಲ್ಲಿ ಅವುಗಳನ್ನು ಟ್ರಸ್ಟ್ ಸಭೆಯ ಮುಂದೆ ಮಂಡಿಸಿ ಅನುಮೋದನೆ ಪಡೆದು ನಂತರ ತಿದ್ದುಪಡಿಗಳನ್ನು ಮಾಡಲು ಸಚಿವ ಸಂಪುಟವು ತಿಳಿಸಿದೆ.

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಕುಕ 41 ಸಿಜಿಇ 2017,**
**ಬೆಂಗಳೂರು, ದಿನಾಂಕ:** 07/06/17

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಸಹಕಾರ ಇಲಾಖೆಯ ಅಡಿಯಲ್ಲಿನ ಯಶಸ್ವಿನಿ ಸಹಕಾರಿ ಆರೋಗ್ಯ ರಕ್ಷಣಾ ಯೋಜನೆ (ಯಶಸ್ವಿನಿ ಯೋಜನೆ)ಯನ್ನು ಪ್ರಸ್ತುತ ಜಾರಿಯಲ್ಲಿರುವ ನಿಯಮಾವಳಿಗಳಂತೆಯೇ 2017-18ನೇ ಸಾಲಿನಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೂಲಕ ಮುಂದುವರಿಸಿ ಅನುಷ್ಠಾನಗೊಳಿಸಲಾಗುವುದು.

S.V
07/06/17

ದಿನಾಂಕ:01.06.2017 ರಿಂದ ಯಶಸ್ವಿನಿ ಟ್ರಸ್ಟ್‌ನ Management Support Service Agency ಯಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನ ಸಂಸ್ಥೆಯಾದ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಕಾರ್ಯನಿರ್ವಹಿಸತಕ್ಕದ್ದು.

ಪ್ರಸ್ತುತ ಇರುವ ಯಶಸ್ವಿನಿ ಸಹಕಾರಿ ರೈತರ ಆರೋಗ್ಯ ರಕ್ಷಣಾ ಟಸ್ಟ್ ಡೀಡ್‌ನಲ್ಲಿ ಸರ್ಕಾರದ ಕಾರ್ಯದರ್ಶಿ, ಸಹಕಾರ ಇಲಾಖೆಯ ಬದಲು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರನ್ನು ಅಧ್ಯಕ್ಷರೆಂದು ತಿದ್ದುಪಡಿ ಮಾಡುವುದು ಹಾಗೂ ಉಳಿದ ತಿದ್ದುಪಡಿಗಳನ್ನು ಯಶಸ್ವಿನಿ ಕೋ-ಆಪರೇಟಿವ್ ಫಾರ್ಮರ್ಸ್ ಹೆಲ್ತ್ ಕೇರ್ ಟ್ರಸ್ಟ್ ಸಭೆಯ ಮುಂದೆ ಮಂಡಿಸಿ ಉಪಬಂಧ 17ರ ಪ್ರಕಾರ ಕ್ರಮ ಕೈಗೊಳ್ಳುವುದು.

ಈ ಆದೇಶವನ್ನು ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ.ಆಇ 443 ವೆಚ್ಚ-5/2017, ದಿನಾಂಕ:27.04.2017ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ.ಯೋಇ/22/ಜಶಲು/2017, ದಿನಾಂಕ:25.04.2017ರಲ್ಲಿ ನೀಡಿರುವ ಅನುಮತಿಯನ್ವಯ ಹಾಗೂ ಸಚಿವ ಸಂಪುಟವು ಪ್ರಕರಣ ಸಂಖ್ಯೆ. ಸಿ:340/2017, ದಿನಾಂಕ: 30.05.2017ರಲ್ಲಿ ನೀಡಿರುವ ಅನುಮೋದನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

S.V 07/06/17

(ಎಸ್.ವಿ.ಕಲಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಆರೋಗ್ಯ 1 ಮತ್ತು 2)

ಇವರಿಗೆ:

**ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಕರ್ನಾಟಕ ರಆಜ್ಯಪತ್ರದಲ್ಲಿ ಪ್ರಕಟಿಸಿ, ಅದರ 250 ಪ್ರತಿಗಳನ್ನು ಒದಗಿಸಲು ಕೋರಿದೆ.**

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ & ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ. "ಆಡಿಟ್ ಭವನ", ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
4. ಸರ್ಕಾರದ ಮುಖ್ಯಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

5. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು
6. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳು, ಸಹಕಾರಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸಸೌಧ, ಬೆಂಗಳೂರು.
10. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
11. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು
12. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು
13. ವ್ಯವಸ್ಥಾಪಕ ನಿರ್ದಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು
14. ವ್ಯವಸ್ಥಾಪಕ ನಿರ್ದಶಕರು, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ ಬ್ಯಾಂಕ್ ನಿ., ಚಾಮರಾಜಪೇಟೆ ಬೆಂಗಳೂರು
15. ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ಅಧ್ಯಕ್ಷರು/ವ್ಯವಸ್ಥಾಪಕ ನಿರ್ದೇಶಕರುಗಳು
16. ವ್ಯವಸ್ಥಾಪಕ ನಿರ್ದಶಕರು, ಕರ್ನಾಟಕ ರಾಜ್ಯ ಸಹಕಾರ ಹಾಲು ಉತ್ಪಾದಕರ ಮಹಾಮಂಡಳ ನಿಯಮಿತ ಬೆಂಗಳೂರು
17. ರಾಜ್ಯದ ಸಹಕಾರ ಸಂಘಗಳ ಪ್ರಾಂತೀಯ ಜಂಟಿ ನಿಬಂಧಕರುಗಳೂ ಬೆಂಗಳೂರು/ಮೈಸೂರು / ಬೆಳಗಾವಿ/ ರಾಯಚೂರು.
18. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಜಿಲ್ಲಾ ಉಪನಿಬಂಧಕರುಗಳು.
19. ರಾಜ್ಯದ ಎಲ್ಲಾ ಉಪ ವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು
20. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ, ಬೆಂಗಳೂರು
21. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
22. ರಾಜ್ಯದ ಎಲ್ಲಾ ಜಿಲ್ಲೆಗಳ ಆರೋಗ್ಯ ಮತ್ತು ಕುಟುಂಬಕಲ್ಯಾಣಾಧಿಕಾರಗಳು.
23. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳೂ
24. ವಿಶೇಷ ಕರ್ತವ್ಯಾಧಿಕಾರಿಗಳು ಹಾಗೂಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ
25. ಯಶಸ್ವಿನಿ ಸಹಕಾರಿ ರೈತರ ಆರೋಗ್ಯ ರಕ್ಷಣಾ ಟ್ರಸ್ಟನ ಎಲ್ಲಾ ಟ್ರಸ್ಟೀಗಳು
26. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಬಿಎಂಟಿಸಿ-ಟಿಟಿಎಂಸಿ, 4ನೇ ಮಹಡಿ, ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು.
27. ನಿರ್ದೇಶಕರು, ಖಜಾನೆ ನಿರ್ದೇಶನಾಲಯ, ಬೆಂಗಳೂರು-01.
28. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಸರ್ಕಾರದ ಉಪ ಕಾರ್ಯದರ್ಶಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-1, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4&5) ವಿಧಾನಸೌಧ, ಬೆಂಗಳೂರು.